ದಿನಾಂಕಃ 13-01-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದ,

1) ನಾನು ವಿದ್ಯಾಭ್ಯಾಸ ಮಾಡಿರುವುದಿಲ್ಲ. ನಾನು ಗೃಹಿಣಿ ಆಗಿರುತ್ತೇನೆ. ನಾನು ಲಾಭದಾಯಕ ಉದ್ದಿಮೆಯನ್ನು ನಡೆಸುತ್ತಿಲ್ಲ. ಆರೋಪಿ ನಮ್ಮ ಮನೆಯಲ್ಲಿ ಬಾಡಿಗೆದಾರರಾಗಿ ಇರುವ ಕಾರಣ ಪರಿಚಯ ಇರುತ್ತಾರೆ. ಆರೋಪಿ 3 ವರ್ಷಗಳ ಕಾಲ ನಮ್ಮ ಮನೆಯಲ್ಲಿ ಬಾಡಿಗೆ ಇದ್ದರು. ಆರೋಪಿ ಜಯದೇವ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿದ್ದಾರೆ. ಆರೋಪಿಗೆ ಮಾಸಿಕ ವೇತನ ಬರುತ್ತದೆ ಎಂದರೆ ಸರಿ. ಆರೋಪಿ ಇದೇ 5 ನೇ ತಿಂಗಳಿನಲ್ಲಿ ಸಾಲ ಪಡೆದುಕೊಂಡಿರುತ್ತಾರೆ. ಆರೋಪಿ ಹಣ ಕೇಳಿದ ಒಂದು ವಾರದ ನಂತರ ನಾನು ಹಣ ನೀಡಿರುತ್ತೇನೆ. ಆರೋಪಿ ಹಣ ಕೇಳಿದ ವಿಷಯವನ್ನು ನನ್ನ ದೂರಿನಲ್ಲಿ ತಿಳಿಸಿರುವುದಿಲ್ಲ.

2) ಆರೋಪಿ ನನ್ನ ಬಳಿ ದಿನಾಂಕ 12.05.2025 ರಂದು ಮಧ್ಯಾಹ್ನ 12.00 ಗಂಟೆಗೆ ಹಣ ಪಡೆದುಕೊಂಡಿರುತ್ತಾರೆ. ದಿನಾಂಕ 12.05.2025 ರಂದು ಆರೋಪಿ ನನ್ನ ಬಳಿ ಹಣ ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿ ಸದರಿ ದಿನಾಂಕದಂದು ಕರ್ತವ್ಯದಲ್ಲಿ ಇದ್ದರು ಎಂದರೆ ಸರಿಯಲ್ಲ. ಆರೋಪಿ ಹಣವನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಗೆ ಸೇರಿದ ಚೆಕ್ಕನ್ನು ನಾನು ದುರುಪಯೋಗ ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ನನಗೆ 3,90,000/- ಹಣ ನೀಡುವ ಸಾಮರ್ಥ್ಯ ಇಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ಪ್ರಕರಣ ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿ ಪ್ರತ್ಯುತ್ತರ ನೀಡಿರುತ್ತಾರೆ ಎಂದರೆ ಸರಿಯಲ್ಲ.

ಮುಂದುವರೆದ ಪಾಟೀ ಸವಾಲು ವಿಚಾರಣೆಗೆ ಕಾಲಾವಕಾಶ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ